# ಸೌಹಾರ್ದ ಸಹಕಾರಿಗಳ ಕಾರ್ಯಚಟುವಟಿಕೆಗಳ ಅಧ್ಯಯನ ಹಾಗೂ ಅವಲೋಕನ

**ಸಂಯುಕ್ತ ಸಹಕಾರಿಯ ಅಧ್ಯಕ್ಷರು, ಉಪಾಧ್ಯಕ್ಷರು, ನಿರ್ದೇಶಕರು ಹಾಗೂ ವ್ಯವಸ್ಥಾಪಕ ನಿರ್ದೇಶಕರು ವಿವಿಧ ಸಂದರ್ಭಗಳಲ್ಲಿ ರಾಜ್ಯದ ವಿವಿಧ ಸೌಹಾರ್ದ ಸಹಕಾರಿಗಳಿಗೆ ಭೇಟಿ ನೀಡಿ, ಸಹಕಾರಿಗಳ ಅಧ್ಯಕ್ಷರು, ನಿರ್ದೇಶಕರು ಹಾಗೂ ಅಧಿಕಾರಿಗಳನ್ನು ಭೇಟಿ ಮಾಡಿದ ಸಮಯದಲ್ಲಿ ಚರ್ಚಿಸಿದ ಹಾಗೂ ಗಮನಿಸಿದ ವಿಷಯಗಳು.**

- ಸಂಯುಕ್ತ ಸಹಕಾರಿಯ ಅಧ್ಯಕ್ಷರು ಮಾರ್ಚ್ ಮಾಹೆಯಲ್ಲಿ ಚಿಕ್ಕಮಗಳೂರು ಜಿಲ್ಲೆಗೆ ಭೇಟಿ ನೀಡಿದ್ದರು. ಈ ಸಂದರ್ಭದಲ್ಲಿ ಚಿಕ್ಕಮಗಳೂರಿನ ಶ್ರೀ ವಾಸವಿ ವಿವಿಧೋದ್ದೇಶ ಸೌಹಾರ್ದ ಸಹಕಾರಿ, ಕೊಪ್ಪ ತಾಲ್ಲೂಕಿನ ಯಡಗೆರೆ ಸೌಹಾರ್ದ ಪತ್ತಿನ ಸಹಕಾರಿ, ಗಾಯತ್ರಿ ವಿವಿಧೋದ್ದೇಶ ಸೌಹಾರ್ದ ಸಹಕಾರಿ ಹಾಗೂ ಚಿತ್ರದುರ್ಗ ಜಿಲ್ಲೆಯ ಹೊಸದುರ್ಗದ ಶ್ರೀ ಸೀತಾರಾಘವ ಸೌಹಾರ್ದ ಸಹಕಾರ ಬ್ಯಾಂಕ್‌ಗಳಿಗೆ ಭೇಟಿ ನೀಡಿದರು. ಕಳೆದ ತಿಂಗಳಿನಲ್ಲಿ ಮಂಡ್ಯ ಜಿಲ್ಲೆಯ ಮಂಡ್ಯ ಜಿಲ್ಲಾ ಶ್ರೀ ಶ್ರೀ ಜಗಜ್ಯೋತಿ ಬಸವೇಶ್ವರ ಪತ್ತಿನ ಸೌಹಾರ್ದ ಸಹಕಾರಿಗೆ ಹಾಗೂ ಜಿಲ್ಲೆಯ ಸಂಯುಕ್ತ ಸಹಕಾರಿಯ ಸಂಪರ್ಕ ಕಛೇರಿಗೆ ಭೇಟಿ ನೀಡಿದರು.
- ದಿನಾಂಕ 08–05–2018ರಂದು ಮಹಿಳಾ ಅಭ್ಯುದಯ ಸೌಹಾರ್ದ ಸಹಕಾರಿ ನಿ., ಮಂಗಳೂರು, ಬೋಳಾರ ಸೌಹಾರ್ದ ಕ್ರೆಡಿಟ್ ಕೋ–ಆಪರೇಟಿವ್ ನಿ., ಬೋಳಾರ, ವಿಶ್ವ ಬೆಳಕು ಸೌಹಾರ್ದ ಸಹಕಾರಿ ನಿ., ಮಂಗಳೂರು, ಕಾಂಚನ ಕ್ರೆಡಿಟ್ ಸೌಹಾರ್ದ ಸಹಕಾರಿ ನಿ., ಮಂಗಳೂರು, ಪ್ರಣವ ಸೌಹಾರ್ದ ಸಹಕಾರಿ ನಿ., ಮಂಗಳೂರು ಸಹಕಾರಿಗಳಿಗೆ ಭೇಟಿ ನೀಡಿದರು. ಅವರ ಜೊತೆಯಲ್ಲಿ ಸಂಯುಕ್ತ ಸಹಕಾರಿಯ ನಿರ್ದೇಶಕರಾದ ಶ್ರೀ ಮಂಜುನಾಥ, ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಶರಣಗೌಡ ಜಿ. ಪಾಟೀಲ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

1. ಹಿರಿಯ ಮಹಿಳಾ ಸಹಕಾರಿ ಶ್ರೀಮತಿ ಭಾರತಿ ಭಟ್ ನೇತೃತ್ವದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಅಭ್ಯುದಯ ಸೌಹಾರ್ದ ಸಹಕಾರಿಯು ಪ್ರಾರಂಭವಾಗಿ 8 ವರ್ಷಗಳು ಕಳೆದಿವೆ. 960 ಸದಸ್ಯರಿದ್ದಾರೆ. ರೂ.1.4 ಕೋಟಿ ಠೇವಣಿ ಇದೆ. ರೂ.1.5 ಕೋಟಿ ಸಾಲ ನೀಡಲಾಗಿದೆ. ಸಾಲ ವಸೂಲಾತಿ ಸಮಸ್ಯೆ ಇಲ್ಲ. ಎನ್.ಪಿ.ಎ. ಇಲ್ಲ. ಪ್ರಸಕ್ತ ಸಾಲಿನಲ್ಲಿ ರೂ.51000 ಲಾಭ ಗಳಿಸಿದೆ. ಗಣಕೀಕರಣವಾಗಿದೆ. ಸ್ವಂತ ಕಟ್ಟಡ ವಿಚಾರ ಇದೆ. ಸಂಯುಕ್ತ ಸಹಕಾರಿಯ ಅಧಿಕಾರಿಗಳು ಸಹಕಾರಿಯ ಅಭಿವೃದ್ಧಿಯ ಬಗ್ಗೆ ಸಲಹೆ ಹಾಗೂ ಮಾರ್ಗದರ್ಶನ ನೀಡುತ್ತಿದ್ದಾರೆ. ಕಾಮನ್ ಸಾಫ್ಟ್‌ವೇರ್ ಬೇಗ ವ್ಯವಸ್ಥೆ ಮಾಡಿಕೊಡಲು ವಿನಂತಿಸಿರುತ್ತಾರೆ. ಸಹಕಾರಿ ತತ್ವಗಳ ಆಶಯದಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆ. ಸದಸ್ಯ ಹಾಗೂ ಸಂಯುಕ್ತ ಸಹಕಾರಿಯ ಸ್ನೇಹಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಸಂಯುಕ್ತ ಸಹಕಾರಿಯ ಅಧ್ಯಕ್ಷರಾದ ಶ್ರೀ ಬಿ.ಹೆಚ್.ಕೃಷ್ಣಾರೆಡ್ಡಿಯವರು ಅಭಿಪ್ರಾಯ ವ್ಯಕ್ತಪಡಿಸಿದರು.



ಮಹಿಳಾ ಅಭ್ಯುದಯ ಸೌಹಾರ್ದ ಸಹಕಾರಿ ನಿ., ಮಂಗಳೂರು.

2. ಬೋಳಾರ ಸೌಹಾರ್ದ ಕ್ರೆಡಿಟ್ ಕೋ–ಆಪರೇಟಿವ್ ನಿ., ಬೋಳಾರ, ಮಂಗಳೂರು ಸಹಕಾರಿಯು 2011ರಲ್ಲಿ ಪ್ರಾರಂಭವಾಗಿದೆ. 936 ಸದಸ್ಯರನ್ನು ಹೊಂದಿದೆ. ರೂ.5.5 ಕೋಟಿ ಠೇವಣಿ ಇದೆ. ರೂ.4.5 ಕೋಟಿ ಸಾಲ ನೀಡಿದ್ದಾರೆ. ಪ್ರಸಕ್ತ ಸಾಲಿನಲ್ಲಿ ರೂ.10.00 ಲಕ್ಷ ಲಾಭ ಗಳಿಸಿದ್ದಾರೆ. ಸಾಮಾಜಿಕ ಕಳಕಳಿ ಎನ್ನುವ ಸಹಕಾರ ತತ್ವದಡಿಯಲ್ಲಿ ಸಹಕಾರಿಯ ಕಾರ್ಯವ್ಯಾಪ್ತಿಯಲ್ಲಿ ಸಾಮೂಹಿಕ ದೀಪಾವಳಿ ಆಚರಣೆ, ಈಷ್ಠಹಾರ ಕೂಟ, ಮೆರಿಟ್ ಸ್ಕಾಲರ್‌ಶಿಪ್, ರಕ್ತದಾನ, ಆರೋಗ್ಯ ತಪಾಸಣೆಯಂತಹ ಹಲವಾರು ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ನಿರ್ದೇಶಕರು ಸಕ್ರಿಯವಾಗಿ ಪಾಲ್ಗೊಳ್ಳುತ್ತಿದ್ದಾರೆ. 10 ಸ್ವ–ಸಹಾಯ ಗುಂಪುಗಳನ್ನು ನಿರ್ವಹಿಸಲಾಗುತ್ತಿದೆ. ಸಮಸ್ಯೆಗಳು ಯಾವುವು ಇರುವುದಿಲ್ಲ. ಸಂಯುಕ್ತ ಸಹಕಾರಿಯ ಅಧಿಕಾರಿಗಳು ಕಾಲ ಕಾಲಕ್ಕೆ ಅಗತ್ಯವಾದ ಮಾರ್ಗದರ್ಶನ ನೀಡುತ್ತಿದ್ದಾರೆ. ಸಂಯುಕ್ತ ಸಹಕಾರಿಯು ರಾಜ್ಯದಾದ್ಯಂತ ಎಲ್ಲಾ ಸೌಹಾರ್ದ ಸಹಕಾರಿಗಳ ಜೊತೆಗೆ ನಿಕಟ ಸಂಪರ್ಕ ಹೊಂದಿ ಅಭಿವೃದ್ಧಿ ಪರ ಚಿಂತನೆಗಳನ್ನು ಎಲ್ಲಾ ಕಡೆಗಳಲ್ಲೂ ಪ್ರಚುರಪಡಿಸುವ ಉದ್ದೇಶ ಹೊಂದಿ ಈ ರೀತಿ ಭೇಟಿಗಳನ್ನು ಮಾಡಲಾಗುತ್ತಿದೆ. ನಿಮ್ಮ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ಪ್ರಯತ್ನ ನಮ್ಮದಾಗಿದೆ ಎಂದು ಶ್ರೀ ಬಿ.ಹೆಚ್.ಕೃಷ್ಣಾರೆಡ್ಡಿಯವರು ತಿಳಿಸಿದರು.